# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1036

ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 25-07-2024

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರತಿ ವರ್ಷವೂ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರಧಾನ ಮಾಡುವುದನ್ನು ನಿಯಮಿತವಾಗಿ ಆಗದಿರಲು ಕಾರಣಗಳೇನು; | 2018ನೇ ಸಾಲಿನ ರಾಜ್ಯ ಚಲನಚಿತ್ರ ಪ್ರಶಸ್ತಿಗೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿದ್ದ ಹಿನ್ನೆಲೆಯಲ್ಲಿ ಹಾಗೂ ಕೋವಿಡ್-19ರ ಮಾರಕ ಖಾಯಿಲೆಯಿಂದಾಗಿ ಎರಡು ವರ್ಷಗಳಿಗೂ ಹೆಚ್ಚುಕಾಲ ಕೋವಿಡ್ ನಿಯಮಾವಳಿಗಳು ಜಾರಿಯಲ್ಲಿದ್ದ ಕಾರಣ ಆಯ್ಕೆ ಸಮಿತಿಗಳನ್ನು ರಚಿಸಿರುವುದಿಲ್ಲ. |
| (ಆ) | ಬಾಕಿ ಇರುವ ಪ್ರಶಸ್ತಿ ಗಳನ್ನು ಹಾಗೂ ಪ್ರಸಕ್ತ ವರ್ಷದ ಪ್ರಶಸ್ತಿಗಳನ್ನು ಯಾವಾಗ ಪ್ರಧಾನ ಮಾಡಲಾಗುವುದು; | ಪ್ರಸ್ತುತ ರಾಜ್ಯ ಸರ್ಕಾರವು 2019, 2020 ಮತ್ತು 2021ನೇ ಕ್ಯಾಲೆಂಡರ್ ವರ್ಷದ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಗಳನ್ನು ಆಯ್ಕೆ ಮಾಡಲು ಸಮಿತಿ ರಚಿಸಿ ಆದೇಶ ಹೊರಡಿಸಿದೆ. ಸಮಿತಿಗಳು ಚಲನಚಿತ್ರ ವೀಕ್ಷಣೆ ಕಾರ್ಯ ಕೈಗೊಳ್ಳಲ್ಲಿದ್ದು ಈ ವರ್ಷದ ಅಂತ್ಯದೊಳಗೆ ಮೂರು ವರ್ಷಗಳ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು. |
| (ಇ) | ಈ ಪ್ರಶಸ್ತಿಗಳನ್ನು ಫಿಲಂ ಫೇರ್ ಹಾಗೂ ರಾಷ್ಟ್ರ ಪ್ರಶಸ್ತಿಗಳ ಹಾಗೆ ಒಂದು ನಿಗದಿತ ದಿನಾಂಕಗಳಂದು ಪ್ರತಿವರ್ಷವೂ ತಪ್ಪದೇ ಪ್ರಧಾನ ಮಾಡಲು ಕ್ರಮ ತೆಗೆದುಕೊಳ್ಳ ಲಾಗುವುದೇ? | ಸರ್ಕಾರದ ಆದೇಶ ಸಂಖ್ಯೆ:ಕಸಂವಾ 96 ಪಿಐಎಫ್ 2016, ದಿ:23-12-2016ರನ್ವಯ ವಾರ್ಷಿಕ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಪ್ರತಿವರ್ಷ ಡಾ. ರಾಜ್ ಕುಮಾರ್‌ರವರ ಜನ್ಮ ದಿನವಾದ ಏಪ್ರಿಲ್ 24 ರಂದು ಏರ್ಪಡಿಸಲಾಗುವುದು. |

**ಸಂಖ್ಯೆ: ಕಸಿಐ/192/ಪಿಐಪಿ/2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ